## ಕರ್ನಾಟಕ ಲೋಕಾಯುಕ್ತ

ನಂ. ಕಂಪ್ಲೆಂಟ್/ಉಪಲೋಕ್/ಬಿಡಿ/3376/2021 ಬಹುಮಹಡಿಗಳ ಕಟ್ಟಡ,
ಮಂಡನಾಧಿಕಾರಿಗಳ ಶಾಖೆ, ಪಿ.ಒ. ಎ.ಆರ್.ಇ.17 ಡಾ: ಅಂಬೇಡ್ಕರ್ ವೀದಿ,ಬೆಂಗಳೂರು,
ದಿನಾಂಕ: 16/05/2022

17L

### ಕರ್ನಾಟಕ ಲೋಕಾಯುಕ್ತ ಕಾಯಿದೆ 1984 ರ ಕಲಂ 12(3)ರ ಅನ್ವಯ ವರದಿ

*****

ವಿಷಯ: ಸರ್ಕಾರಿ ನೌಕರರಾದ ಶ್ರೀ ಆರ್. ತಿಮ್ಮಾಬೋವಿ ಬಿನ್ ರಾಮಾಭೋವಿ, ಲೆಕ್ಕ ಅಧೀಕ್ಷಕರು, ಕಾರ್ಯನಿರ್ವಾಹಕ ಅಭಿಯಂತರವರ ಕಛೇರಿ, ರಾಷ್ಟ್ರೀಯ ಹೆದ್ದಾರಿ ವಿಭಾಗ, ಚಿತ್ರದುರ್ಗ ಇವರು ಕರ್ತವ್ಯ ಲೋಪ/ದುರ್ನಡತೆ ಎಸಗಿರುವ ಬಗ್ಗೆ.

*****

1) ಚಿತ್ರದುರ್ಗ ಭ್ರಷ್ಟಾಚಾರ ನಿಗ್ರಹ ದಳ ಪೊಲೀಸ್ ಠಾಣೆಯ ಆರಕ್ಷಕ ನಿರೀಕ್ಷಕರು (ಇನ್ನು ಮುಂದೆ ತನಿಖಾಧಿಕಾರಿ ಎಂದು ಕರೆಯಲ್ಪಡುತ್ತಾರೆ) ಸಲ್ಲಿಸಿದ ತನಿಖಾ ವರದಿ ಮತ್ತು ಸಂಬಂಧಿಸಿದ ದಾಖಲೆಗಳನ್ನು ಪರಿಶೀಲಿಸಿದಾಗ ವರದಿಯಲ್ಲಿ ಶ್ರೀ ಆರ್. ತಿಮ್ಮಾಬೋವಿ ಬಿನ್ ರಾಮಾಭೋವಿ, ಲೆಕ್ಕ ಅಧೀಕ್ಷಕರು, ಕಾರ್ಯನಿರ್ವಾಹಕ ಅಭಿಯಂತರವರ ಕಛೇರಿ, ರಾಷ್ಟ್ರೀಯ ಹೆದ್ದಾರಿ ವಿಭಾಗ, ಚಿತ್ರದುರ್ಗ ಜಿಲ್ಲೆ (ಇನ್ನು ಮುಂದೆ 'ಎದುರುದಾರರು' ಎಂದು ಕರೆಯಲ್ಪಡುತ್ತಾರೆ) ಇವರ ವಿರುದ್ಧ ಶ್ರೀ ಕೆ. ಸತ್ಯನಾರಾಯಣ, ಪೊಲೀಸ್ ನಿರೀಕ್ಷಕರು, ಕರ್ನಾಟಕ ಲೋಕಾಯುಕ್ತ, ಚಿತ್ರದುರ್ಗ ಜಿಲ್ಲೆ (ಇನ್ನು ಮುಂದೆ ದೂರುದಾರರು ಎಂದು ಕರೆಯಲ್ಪಡುತ್ತಾರೆ) ಇವರಿಗೆ ಬಂದ ಖಚಿತ ಮಾಹಿತಿಯ ಮೇರೆಗೆ ಈ ಬಗ್ಗೆ ರಹಸ್ಯ ಮಾಹಿತಿಯನ್ನು ಸಂಗ್ರಹಿಸಿ ಹಾಗೂ ದಾಖಲಾತಿಗಳನ್ನು ಪರಿಶೀಲನೆ ಮಾಡಿ ಎದುರುದಾರರು ತಮ್ಮ ಹಾಗೂ ತಮ್ಮ ಕುಟುಂಬದ ಹೆಸರಿನಲ್ಲಿ ಸ್ಥಿರ ಮತ್ತು ಚರ ಆಸ್ತಿಗಳನ್ನು ಹೊಂದಿರುವುದನ್ನು ದೃಢಪಡಿಸಿಕೊಂಡು ಎದುರುದಾರರು ತಮ್ಮ ಸೇವಾ ಅವಧಿಯಲ್ಲಿ ಅವರ ಬಲ್ಲ ಮೂಲಗಳ ಆದಾಯಕ್ಕಿಂತ ಅಧಿಕವಾಗಿ 91.10% ಮೌಲ್ಯದ ಆಸ್ತಿಗಳನ್ನು ಅಸಮತೋಲನವಾಗಿ ಹೊಂದಿರುವ ಕಾರಣ ಸೋರ್ಸ್ ವರದಿಯನ್ನು ಪೊಲೀಸ್ ಅಧೀಕ್ಷಕರು, ಕರ್ನಾಟಕ ಲೋಕಾಯುಕ್ತ, ಚಿತ್ರದುರ್ಗ ವಿಭಾಗ, ಚಿತ್ರದುರ್ಗ ಇವರಿಗೆ ಸಲ್ಲಿಸಿ ಅವರು ಪರಿಶೀಲಿಸಿದ ನಂತರ ಅಸಮತೋಲನವಾಗಿ ಆಸ್ತಿಗಳನ್ನು

ಹೊಂದಿರುತ್ತಾರೆಂದು ಮನಗಂಡು ಎದುರುದಾರರ ವಿರುದ್ಧ ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮ 1966 ರ (ಪ್ರಸ್ತುತ ಕರ್ನಾಟಕ ನಾಗರಿಕ ಸೇವಾ(ನಡತೆ) ನಿಯಮಗಳು 2021) ರ ನಿಯಮಗಳನ್ನು ಪಾಲಿಸದೆ ದುರ್ನಡತೆ ತೋರಿಸಿರುತ್ತಾರೆ ಎನ್ನುವುದು ಮೇಲ್ನೋಟಕ್ಕೆ ಕಂಡುಬಂದಿದ್ದರಿಂದ ಕರ್ನಾಟಕ ಲೋಕಾಯುಕ್ತ ಕಾಯಿದೆ 1984 ರ ಕಲಂ 7(2) ರನ್ವಯ ಗೌರವಾನ್ವಿತ ಉಪಲೋಕಾಯುಕ್ತರವರು ತನಿಖೆ ಕೈಗೊಂಡಿರುತ್ತಾರೆ

2) **ದೂರಿನ ಸಂಕ್ಷಿಪ್ತ ವಿವರಣೆ:-** ದೂರುದಾರರಿಗೆ ಬಂದ ಖಚಿತ ಮಾಹಿತಿಯ ಮೇರೆಗೆ ಈ ಬಗ್ಗೆ ರಹಸ್ಯ ಮಾಹಿತಿಯನ್ನು ಸಂಗ್ರಹಿಸಿ ಹಾಗೂ ದಾಖಲಾತಿಗಳನ್ನು ಪರಿಶೀಲನೆ ಮಾಡಿದಾಗ ಎದುರುದಾರರು ತಮ್ಮ ಹಾಗೂ ತಮ್ಮ ಕುಟುಂಬದ ಹೆಸರಿನಲ್ಲಿ ಸ್ಥಿರ ಮತ್ತು ಚರ ಆಸ್ತಿಗಳನ್ನು ಹೊಂದಿರುವುದನ್ನು ದೃಢಪಡಿಸಿಕೊಂಡು ಎದುರುದಾರರು ತಮ್ಮ ಸೇವಾ ಅವಧಿಯಲ್ಲಿ ಅವರ ಬಲ್ಲ ಮೂಲಗಳ ಆದಾಯಕ್ಕಿಂತ ಅಧಿಕವಾಗಿ 91.10% ಮೌಲ್ಯದ ಆಸ್ತಿಗಳನ್ನು ಅಸಮತೋಲನವಾಗಿ ಹೊಂದಿರುವ ಕಾರಣ ಸೋರ್ಸ್ ವರದಿಯನ್ನು ಪೊಲೀಸ್ ಅಧೀಕ್ಷಕರು, ಕರ್ನಾಟಕ ಲೋಕಾಯುಕ್ತ, ಚಿತ್ರದುರ್ಗ ವಿಭಾಗ, ಚಿತ್ರದುರ್ಗ ಇವರಿಗೆ ಸಲ್ಲಿಸಿ ಅವರು ಪರಿಶೀಲಿಸಿದ ನಂತರ ಅಸಮತೋಲನವಾಗಿ ಆಸ್ತಿಗಳನ್ನು ಎದುರುದಾರರು ಹೊಂದಿರುತ್ತಾರೆಂದು ಮನಗಂಡು ಎದುರುದಾರರ ವಿರುದ್ಧ ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮ 1966 ರ (ಪ್ರಸ್ತುತ ಕರ್ನಾಟಕ ನಾಗರಿಕ ಸೇವಾ(ನಡತೆ) ನಿಯಮಗಳು 2021) ರ ನಿಯಮಗಳನ್ನು ಪಾಲಿಸದೆ ದುರ್ನಡತೆ ತೋರಿಸಿರುತ್ತಾರೆ ಎನ್ನುವುದು ಮೇಲ್ನೋಟಕ್ಕೆ ಕಂಡುಬಂದಿದ್ದರಿಂದ ಕರ್ನಾಟಕ ಲೋಕಾಯುಕ್ತ ಕಾಯಿದೆ 1984 ರ ಕಲಂ 7(2) ರನ್ವಯ ಗೌರವಾನ್ವಿತ ಉಪಲೋಕಾಯುಕ್ತರವರು ತನಿಖೆ ಕೈಗೊಂಡಿರುತ್ತಾರೆ.

| | |
|---|---|
| 1 | ಎದುರುದಾರರು 1985-86, 1986-87, 1987-88, 1988-89 ಮತ್ತು 1989-90 ನೇ ಸಾಲಿನ ಆಸ್ತಿ-ದಾಯಿತ್ವ ಪಟ್ಟಿಗಳನ್ನು ಸಲ್ಲಿಸಿರುವುದಿಲ್ಲ. ಇದರಿಂದ ಕೆ.ಸಿ.ಎಸ್.ಆರ್. (ನಡತೆ) ನಿಯಮಗಳು 1966 ರ ನಿಯಮ 23 (1) ರ ಉಲ್ಲಂಘನೆ ಮಾಡಿರುತ್ತಾರೆ. |
| 2 | ಎದುರುದಾರರು ಅವರ ಪತ್ನಿಯ ಹೆಸರಿನಲ್ಲಿ ಚನ್ನಗಿರಿ ತಾಲ್ಲೂಕು ಕಂಸಾಗರ ಗ್ರಾಮದಲ್ಲಿ ಜಮೀನನ್ನು ದಾನವಾಗಿ (ಅವರ ಮಾವನ ಕಡೆಯಿಂದ) |

| | |
|---|---|
| | ಪಡೆದುಕೊಂಡಾಗ, ಚಿತ್ರದುರ್ಗ ತಾಲ್ಲೂಕು ಸೊಂಡೇಕೊಳ ಗ್ರಾಮದಲ್ಲಿ ಅವರ ಪತ್ನಿಯ ಹೆಸರಿನಲ್ಲಿ 04 ಎಕರೆ ಜಮೀನನ್ನು ಖರೀದಿಸಿದಾಗ, ಚಿತ್ರದುರ್ಗ ನಗರದ ಕೆಳಗೋಟೆ ಯಂಗಮ್ಮನಕಟ್ಟೆ ಬಳಿ ನಿವೇಶನ ಸಂಖ್ಯೆ 74 ರ ಖರೀದಿಯ ಸಮಯದಲ್ಲಿ, ದಾವಣಗೆರೆ ನಗರದ ಶಿರಮಗೊಂಡನಹಳ್ಳಿ ನಿವೇಶನ ಸಂಖ್ಯೆ 500/230 ರ ಖರೀದಿಯ ಸಮಯದಲ್ಲಿ, ದಾವಣಗೆರೆ ನಗರದ ಶಿವಕುಮಾರಸ್ವಾಮಿ ಬಡಾವಣೆಯ ಮನೆ ನಂ. 1328/2 ರ ನಿವೇಶನ ಖರೀದಿ ಮತ್ತು ಮನೆ ನಿರ್ಮಾಣದ ಸಮಯದಲ್ಲಿ ನಿಗದಿತ ಪ್ರಾಧಿಕಾರದ ಗಮನಕ್ಕೆ ತಂದು ಪೂರ್ವಾನುಮತಿ ಪಡೆಯದೆ ಕೆ.ಸಿ.ಎಸ್. ಆರ್. (ನಡತೆ) ನಿಯಮಗಳು 1966 ರ ನಿಯಮ 23(2) ರ ಉಲ್ಲಂಘನೆ ಮಾಡಿರುತ್ತಾರೆ. |
| 3. | ಎದುರುದಾರರು ಅವರ ಅಪ್ರಾಪ್ತ ಮಗ ಟಿ. ಇಂಧೂಧರ ಇವರ ಹೆಸರಿನಲ್ಲಿ ಚಿತ್ರದುರ್ಗ ತಾಲ್ಲೂಕು ಸೊಂಡೇಕೊಳ ಗ್ರಾಮದ ರಿ.ಸ. ನಂ. 101 ರಲ್ಲಿ 02 ಎಕರೆ ಜಮೀನು ಖರೀದಿಸಿದ ಸಮಯದಲ್ಲಿ ನಿಗದಿತ ಪ್ರಾಧಿಕಾರದ ಗಮನಕ್ಕೆ ತಂದು ಪೂರ್ವಾನುಮತಿ ಪಡೆಯದೆ ಕೆ.ಸಿ.ಎಸ್.ಆರ್. (ನಡತೆ) ನಿಯಮಗಳು 1966 ರ ನಿಯಮ 23 (2) ರ ಉಲ್ಲಂಘನೆ ಮಾಡಿರುತ್ತಾರೆ. |
| 4. | ಎದುರುದಾರರು ಅವರ ಹೆಸರಿನಲ್ಲಿ ಖರೀದಿಸಿರುವ ವಾಹನಗಳು ಮತ್ತು ನಗದು ವ್ಯವಹಾರವನ್ನು ನಿಗದಿತ ಪ್ರಾಧಿಕಾರಕ್ಕೆ ವರದಿ ಮಾಡದೆ ಕೆ.ಸಿ.ಎಸ್.ಆರ್. (ನಡತೆ) ನಿಯಮಗಳು 1966 ರ ನಿಯಮ 23 (3) ರ ಉಲ್ಲಂಘನೆ ಮಾಡಿರುತ್ತಾರೆ. |
| 5. | ಎದುರುದಾರರು ಬ್ಯಾಂಕ್ ಗಳಲ್ಲಿ ಸಾಲವನ್ನು ಪಡೆದಿರುವ ಬಗ್ಗೆ ಅವರ ಆಸ್ತಿ ಮತ್ತು ದಾಯಿತ್ವ ಪಟ್ಟಿಗಳಲ್ಲಿ ಘೋಷಿಸಿಕೊಂಡು ನಿಗದಿತ ಪ್ರಾಧಿಕಾರಕ್ಕೆ ವರದಿ ಮಾಡದೆ ಕೆ.ಸಿ.ಎಸ್.ಆರ್ (ನಡತೆ) ನಿಯಮಗಳು 1966 ರ ನಿಯಮ 21 (4) (1) ರ ಉಲ್ಲಂಘನೆ ಮಾಡಿರುತ್ತಾರೆ. ಅಲ್ಲದೆ ಅವರು ಪಡೆದಿರುವ ಮೇಲ್ಕಂಡ ಸಾಲಗಳ ಬಗ್ಗೆ ಸಲ್ಲಿಸಿರುವ ಆದಾಯ ತೆರಿಗೆ ಪಟ್ಟಿಗಳಲ್ಲಿ ಘೋಷಿಸಿಕೊಂಡಿರುವುದಿಲ್ಲ. |

3) ಶ್ರೀ ಕೆ. ಸತ್ಯನಾರಾಯಣ, ಪೊಲೀಸ್ ನಿರೀಕ್ಷಕರು, ಕರ್ನಾಟಕ ಲೋಕಾಯುಕ್ತ, ಚಿತ್ರದುರ್ಗ ಇವರು ಸಲ್ಲಿಸಿರುವ ಸೋರ್ಸ್ ವರದಿಯ ಆಧಾರದ ಮೇಲೆ ಎದುರುದಾರರ ಮೇಲೆ ಪೊಲೀಸ್ ಅಧೀಕ್ಷಕರು, ಕರ್ನಾಟಕ ಲೋಕಾಯುಕ್ತ, ಚಿತ್ರದುರ್ಗ ಇವರಿಗೆ ಸಲ್ಲಿಸಿದ ನಂತರ ಸದರಿಯವರು ಪರಿಶೀಲಿಸಿ ಎದುರುದಾರರ ವಿರುದ್ಧ ಸ್ವಯಂ ದೂರು

ದಾಖಲಿಸಲು ಆದೇಶ ಮಾಡಿದ್ದು ಅದರನ್ವಯ ಚಿತ್ರದುರ್ಗ ಲೋಕಾಯುಕ್ತ ಪೋಲೀಸ್ ಠಾಣೆಯ ಗುನ್ನೆ ನಂ. 11/2014 ರಲ್ಲಿ ಕಲಂ 13 (1)(ಇ) ಸಹ ಕಲಂ 13(2) ಪಿ.ಸಿ. ಕಾಯಿದೆ 1988 ರಡಿಯಲ್ಲಿ ಪ್ರಕರಣ ದಾಖಲಿಸಿಕೊಂಡಿರುತ್ತಾರೆ.

4) ಎದುರುದಾರರು ಪರಿವೀಕ್ಷಣಾ ಟಿಪ್ಪಣಿಗೆ ತಮ್ಮ ಸಮಜಾಯಿಷಿಯನ್ನು ದಿನಾಂಕ 03/12/2021 ರಿಂದ ಇಲ್ಲಿಯವರೆಗೂ ಸಾಕಷ್ಟು ಕಾಲಾವಕಾಶ ನೀಡಿದರೂ ಸಹ ಈ ಕಛೇರಿಗೆ ಸಲ್ಲಿಸಿರುವುದಿಲ್ಲ. ಆದ್ದರಿಂದ ಪರಿವೀಕ್ಷಣಾ ಟಿಪ್ಪಣಿಗೆ ಸಮಜಾಯಿಷಿಯನ್ನು ಸಲ್ಲಿಸದೇ ಇರುವುದೂ ಕೂಡ ಕರ್ತವ್ಯ ಲೋಪವಾಗುತ್ತದೆ.

5) ತನಿಖಾಧಿಕಾರಿಗಳು ಪ್ರಕರಣದ ತನಿಖೆಯ ಸಮಯದಲ್ಲಿ ಎದುರುದಾರರು ದಿನಾಂಕ 22/07/1985 ರಿಂದ ದಿ: 28/11/2014 ರ ಸೇವಾ ಅವಧಿಯಲ್ಲಿ ಸೇವಾ ನಿಯಮಗಳ ಉಲ್ಲಂಘನೆಗಳನ್ನು ಮಾಡಿರುತ್ತಾರೆ.

6) ಎದುರುದಾರರು ಅವರ ಸೇವಾ ಅವಧಿಯಲ್ಲಿ ಅವರ ಪತ್ನಿ ಮತ್ತು ಮಗನ ಹೆಸರಿನಲ್ಲಿ ಪ್ಯಾರಾ 2 ರ 1 ರಿಂದ 5 ಸ್ಥಿರಾಸ್ತಿ ಮತ್ತು ಚರಾಸ್ತಿಗಳನ್ನು ಖರೀದಿಸುವ ಪೂರ್ವದಲ್ಲಿ ನೇಮಿಸಲಾದ ಪ್ರಾಧಿಕಾರದಿಂದ ಅನುಮತಿ ಪಡೆಯದೇ ಖರೀದಿಸಿದ್ದು ಮತ್ತು ನೇಮಿಸಲಾದ ಪ್ರಾಧಿಕಾರಕ್ಕೆ ಮಾಹಿತಿ ಸಲ್ಲಿಸದೇ ಇರುವುದರಿಂದ ಮೇಲ್ಕಂಡ ನಿಯಮಗಳನ್ನು ಪಾಲಿಸದೆ ಕರ್ತವ್ಯ ಲೋಪವೆಸಗಿರುವುದು ಮತ್ತು ಪ್ರಸ್ತುತ ಕ.ನಾ.ಸೇ.(ನಡತೆ) ನಿಯಮ 3 (1) (i) ರಿಂದ (iii) ನ್ನು ಉಲ್ಲಂಘಿಸಿ ದುರ್ನಡತೆ ಎಸಗಿರುವುದು ಮೇಲ್ನೋಟಕ್ಕೆ ಕಂಡುಬಂದಿರುತ್ತದೆ.

7) ತನಿಖಾಧಿಕಾರಿಯವರು ಸಂಗ್ರಹಿಸಿದ ದಾಖಲೆಗಳಿಂದ ಎದುರುದಾರರು ಕಾನೂನು ಸಮ್ಮತ ಆದಾಯಕ್ಕಿಂತ ಅಸಮತೋಲನವಾಗಿ ಆಸ್ತಿಗಳನ್ನು ಅವರ ಹಾಗೂ ಅವರ ಪತ್ನಿಯ ಹೆಸರಿನಲ್ಲಿ ಹೊಂದಿರುವುದು ಹಾಗೂ ಅನುಮತಿ ಇಲ್ಲದೆ ಸ್ಥಿರಾಸ್ತಿ/ಚರಾಸ್ತಿಯನ್ನು ಖರೀದಿಸಿರುವುದು ಹಾಗೂ ಇತರೆ ಅಂಶಗಳು ಎದುರುದಾರರು ನಿಯಮಗಳನ್ನು ಪಾಲಿಸದೇ ದುರ್ನಡತೆಯನ್ನು ಎಸಗಿರುವುದು ಮೇಲ್ನೋಟಕ್ಕೆ ಕಂಡುಬಂದಿರುತ್ತದೆ.

8) ಮೇಲ್ಕಂಡ ಅಂಶಗಳು, ಕಡತದ ಸಂಗತಿಗಳು, ದಾಖಲಾತಿಗಳನ್ನು ಕೂಲಂಕುಷವಾಗಿ ಪರಿಶೀಲಿಸಿದಾಗ, ಸದರಿಯವರು ತಮ್ಮ ವಿರುದ್ಧದ ನಡವಳಿಯನ್ನು ಕೈ ಬಿಡಲು ಸೂಕ್ತ/ಸಮಂಜಸ/ಸಮಾಧಾನಕರ ಕಾರಣ ತೋರಿಸಿಲ್ಲವೆಂದು ಅಭಿಪ್ರಾಯಕ್ಕೆ ಬರಲಾಗಿದೆ.

9) ಆದ್ದರಿಂದ, ಎದುರುದಾರರ ವಿರುದ್ಧ ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಾವಳಿ, 1966 ರ (ಪ್ರಸ್ತುತ ಕರ್ನಾಟಕ ನಾಗರಿಕ ಸೇವಾ(ನಡತೆ) 2021 ನಿಯಮ 3 (1) (i) ರಿಂದ (iii) ರ ಉಲ್ಲಂಘನೆಗಾಗಿ ಶಿಸ್ತು ಕ್ರಮ ಕೈಗೊಳ್ಳಲು ಕರ್ನಾಟಕ ಲೋಕಾಯುಕ್ತ ಕಾಯಿದೆ ಕಲಂ 12(3) ರ ಅಡಿ ಪ್ರದತ್ತವಾದ ಅಧಿಕಾರದಡಿ, ಈ ವರದಿಯ ಮೂಲಕ ಸಕ್ಷಮ ಪ್ರಾಧಿಕಾರಕ್ಕೆ ಶಿಫಾರಸ್ಸು ಮಾಡಲಾಗುತ್ತಿದೆ ಹಾಗೂ ಎದುರುದಾರರ ವಿರುದ್ಧ ಇಲಾಖಾ ವಿಚಾರಣೆ ಮಾಡಲು, ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿ 1957 ರ ನಿಯಮ 14(ಎ) ರಡಿ ಉಪಲೋಕಾಯುಕ್ತರಿಗೆ ವಹಿಸಬೇಕೆಂದೂ ಕೋರಿದೆ.

10) ಮುಂದುವರೆದು, ಕರ್ನಾಟಕ ಲೋಕಾಯುಕ್ತ ಕಾಯಿದೆ 1984 ಕಲಂ 12(4) ರ ಪ್ರಕಾರ ಸಕ್ಷಮ ಪ್ರಾಧಿಕಾರವು, ಈ ವರದಿಯ ಮೇಲೆ ಏನು ಕ್ರಮ ಕೈಗೊಂಡಿದೆ ಅಥವಾ ಏನು ಕ್ರಮ ಕೈಗೊಳ್ಳಲಾಗುತ್ತದೆ ಎಂಬುದರ ಬಗ್ಗೆ ಈ ವರದಿಯನ್ನು ಸ್ವೀಕರಿಸಿದ **ಮೂರು ತಿಂಗಳೊಳಗೆ** ಈ ಪ್ರಾಧಿಕಾರಕ್ಕೆ ತಿಳಿಸಲು ಹೇಳಿದೆ.

ಸಂಬಂಧಪಟ್ಟ ದಾಖಲೆಗಳನ್ನು ಲಗತ್ತಿಸಿದೆ.

17/05/22

**(ನ್ಯಾಯಮೂರ್ತಿ ಕೆ. ಎನ್. ಫಣೀಂದ್ರ)**
ಉಪಲೋಕಾಯುಕ್ತರು-2
ಕರ್ನಾಟಕ ರಾಜ್ಯ, ಬೆಂಗಳೂರು.